I/467508/2023

**ಕರ್ನಾಟಕ ಸರ್ಕಾರ**

ಸಂ:ಸಕನಿ/ಇಡಿ-4/ಸಿಆರ್- 981253 /2022-23

ಸಮಾಜ ಕಲ್ಯಾಣ ಆಯುಕ್ತರ ಕಛೇರಿ
5ನೇ ಮಹಡಿ, ಬಹು ಮಹಡಿಗಳ ಕಟ್ಟಡ,
ಡಾ: ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:10-08-2023

**-: ಸುತ್ತೋಲೆ :-**

ವಿಷಯ : ಸಮಾಜ ಕಲ್ಯಾಣ ಇಲಾಖೆಯ ಸರ್ಕಾರಿ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿನ ಶೌಚಾಲಯ ಸ್ವಚ್ಛತೆಯ ಬಗ್ಗೆ.

ಉಲ್ಲೇಖ :

1. ಈ ಕಛೇರಿ ಸುತ್ತೋಲೆ ಸಂ:ಸಕನಿ/ಇಡಿ-4/ಸಿಆರ್- 981253 /2022-23 ದಿ:20-01-2023
2. ಸರ್ಕಾರದ ಆದೇಶ ಸಂಖ್ಯೆ: ಸಕಇ 55 ಪಕವಿ 2023, ದಿನಾಂಕ: 05.05.2023

*****

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಿರ್ವಹಿಸಲಾಗುತ್ತಿರುವ ಸರ್ಕಾರಿ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿನ ಸ್ವಚ್ಛತೆ ಹಾಗೂ ನೈರ್ಮಲ್ಯದ ಕುರಿತು ಸೂಕ್ತ ನಿರ್ದೇಶನಗಳನ್ನು ನೀಡಿ ಸಮರ್ಪಕ ನಿರ್ವಹಣೆ ಮಾಡುವಂತೆ ಉಲ್ಲೇಖ(1)ರಲ್ಲಿ ಈ ಕಛೇರಿಯಿಂದ ಸುತ್ತೋಲೆ ಹೊರಡಿಸಲಾಗಿರುತ್ತದೆ.

ಮುಂದುವರೆದು, ಉಲ್ಲೇಖ (2) ರ ಸರ್ಕಾರದ ಆದೇಶದಲ್ಲಿ, ಎಲ್ಲಾ ವಿದ್ಯಾರ್ಥಿನಿಲಯಗಳಲ್ಲಿ ಕಡ್ಡಾಯವಾಗಿ ಆಹಾರ ಸಮಿತಿ ಹಾಗೂ ಸ್ವಚ್ಛತಾ ಸಮಿತಿಯನ್ನು ರಚಿಸಿ ವಿದ್ಯಾರ್ಥಿಗಳ ಸಹಭಾಗಿತ್ವದಲ್ಲಿ ನಿಲಯಗಳ ನಿರ್ವಹಣೆ ಮಾಡುವಂತೆ ಆದೇಶಿಸಲಾಗಿರುತ್ತದೆ.

ಆದಾಗ್ಯೂ, ವಿದ್ಯಾರ್ಥಿಗಳಿಂದ ಶೌಚಾಲಯ ಸ್ವಚ್ಛ ಮಾಡಿಸುತ್ತಿರುವ ಬಗ್ಗೆ ಹಲವಾರು ಮಾಧ್ಯಮಗಳಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಸದರಿ ವಿಷಯವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದೆ.

- ಇಲಾಖೆಯ ಅಧೀನದ ವಸತಿ ಶಾಲೆ ಹಾಗೂ ವಿದ್ಯಾರ್ಥಿನಿಲಯಗಳ ಶೌಚಾಲಯಗಳನ್ನು ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳಿಂದ ಸ್ವಚ್ಛತೆ ಮಾಡಿಸುವಂತಿಲ್ಲ ಶೌಚಾಲಯ ಶುಚಿತ್ವ ಸಿಬ್ಬಂದಿಗಳಿಂದ ಸ್ವಚ್ಛತಾ ಕೆಲಸಗಳನ್ನು ನಿರ್ವಹಿಸಲು ಕ್ರಮವಹಿಸುವುದು.
- ವಸತಿ ಶಾಲೆ ಹಾಗೂ ವಿದ್ಯಾರ್ಥಿ ನಿಲಯಗಳಲ್ಲಿ ಶುಚಿತ್ವಕ್ಕೆ ಅಗತ್ಯವಿರುವ ಸಾಮಗ್ರಿಗಳನ್ನು ಖರೀದಿಸಿ ನಿಗಧಿತ ಸ್ಥಳದಲ್ಲಿ ಇರಿಸುವುದು ಹಾಗೂ ಸದರಿ ಛಾಯಾಚಿತ್ರಗಳನ್ನು SHP (STATE HOSTEL PORTAL) ನಲ್ಲಿ HYGENIC HOSTEL CORNER ನಲ್ಲಿ ಆಪ್‌ಲೋಡ್ ಮಾಡುವುದು.
- ನಿಲಯದ ಶುಚಿತ್ವದ ಬಗ್ಗೆ ಹಾಗೂ ಶುಚಿಗೊಳಿಸಲು ಅಗತ್ಯವಿರುವ ವಸ್ತುಗಳ ಶೇಖರಣೆ ಲಭ್ಯವಿದೆಯೇ ಎಂದು ಖಚಿತಪಡಿಸಿಕೊಳ್ಳಲು ಅಧಿಕಾರಿಗಳು ಆಗಿಂದಾಗೆ ತಪಾಸಣೆ ನಡೆಸುವುದು.
- ಶೌಚಾಲಯಗಳಲ್ಲಿ ನೀರು ಸರಬರಾಜು ನೊಂದಿಗೆ ಶೌಚಾಲಯ ಹಾಗೂ ಸ್ನಾನಗೃಹಗಳಲ್ಲಿನ ನಲ್ಲಿಗಳು ಯಾವುದೇ ತೊಂದರೆಗಳಿಲ್ಲದೇ ಕಾರ್ಯನಿರ್ವಹಿಸುವಂತಿರಬೇಕು. ಯಾವುದೇ ದುರಸ್ಥಿಗಳಿದ್ದಲ್ಲಿ ಮುಂದಿನ 48 ಗಂಟೆಯೊಳಗೆ ಇದನ್ನು ಸರಿಪಡಿಸಲು ಕ್ರಮಕೈಗೊಳ್ಳುವುದು.
- ಶೌಚಾಲಯ ಹಾಗೂ ಸ್ನಾನದ ಕೊಠಡಿಗಳನ್ನು ದುರಸ್ಥಿಗೊಳಿಸಬೇಕಾದ್ದಲ್ಲಿ ಹಾಗೂ ಹೆಚ್ಚುವರಿ ಕೊಠಡಿಗಳು

I/467508/2023

ಅಗತ್ಯವಿದ್ದಲ್ಲಿ ನಿಯಮಾನುಸಾರ ಅನುದಾನ ಬಿಡುಗಡೆಗೆ ಪ್ರಸ್ತಾವನೆಯನ್ನು ಸಲ್ಲಿಸಲು ತಾಲ್ಲೂಕು ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳು ಕ್ರಮವಹಿಸುವುದು.

- ಮುಖ್ಯವಾಗಿ ಉಲ್ಲೇಖ (2) ರ ಸರ್ಕಾರದ ಆದೇಶದಂತೆ ಕಡ್ಡಾಯವಾಗಿ ಎಲ್ಲಾ ವಿದ್ಯಾರ್ಥಿನಿಲಯಗಳಲ್ಲಿ ಸ್ವಚ್ಚತಾ ಸಮಿತಿಯನ್ನು ರಚಿಸಿ, ಆ ಸಮಿತಿ ಮೂಲಕ ನಿಲಯದ ಸ್ವಚ್ಚತಾ ಕಾರ್ಯವನ್ನು ದಿನಂಪ್ರತಿ ಕೈಗೊಂಡಿರುವ ಬಗ್ಗೆ ದೃಡೀಕರಿಸಿಕೊಂಡು ವರದಿ ಸಲ್ಲಿಸಲು ಸೂಚಿಸಿದೆ ಹಾಗೂ ಈ ಬಗ್ಗೆ ಪ್ರತ್ಯೇಖ ವಹಿಯನ್ನು ನಿರ್ವಹಣೆ ಮಾಡಿ, ತಪಾಸಣಾಧಿಕಾರಿಗಳಿಗೆ ಸದರಿ ವಹಿಯನ್ನು ಹಾಜರುಪಡಿಸುವುದು.

ಮೇಲ್ಕಂಡ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ, ಇಲಾಖೆಯ ಅಧೀನ ಸರ್ಕಾರಿ ವಸತಿ ಶಾಲೆ ಹಾಗೂ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿ / ವಿದ್ಯಾರ್ಥಿನಿಯರಿಗೆ ಶುಚಿತ್ವದ ಪ್ರಾಮುಖ್ಯತೆ ಶೌಚಾಲಯಗಳು ಮತ್ತು ಸ್ನಾನಗೃಹಗಳ ಉಪಕರಣಗಳನ್ನು ಜವಾಬ್ದಾರಿಯುತವಾಗಿ ಬಳಸಲು ಪ್ರೇರೇಪಿಸುವುದು ಮತ್ತು ತ್ಯಾಜ್ಯ ವಿಲೇವಾರಿಯ ಬಗ್ಗೆ ಅರಿವು ಮೂಡಿಸುವುದು ಸೇರಿದಂತೆ ಶೌಚಾಲಯ ಸ್ವಚ್ಚತೆ ಬಗ್ಗೆ ಅಭಿಯಾನಕ್ಕೆ ಹೆಚ್ಚು ಅಧ್ಯತೆ ನೀಡಿ ಮೇಲ್ಕಂಡ ನಿರ್ದೇಶನಗಳನ್ನು ಕಡ್ಡಾಯವಾಗಿ ಅನುಸರಿಸುವುದು.

ಒಂದು ವೇಳೆ ಸದರಿ ನಿರ್ದೇಶನಗಳನ್ನು ನಿರ್ಲಕ್ಷಿಸಿ ಈ ರೀತಿಯ ಪ್ರಕರಣಗಳು ಮರುಕಳಿಸಿದಲ್ಲಿ ಅಂತಹ ತಾಲ್ಲೂಕಿನ ಸಹಾಯಕ ನಿರ್ದೇಶಕರು ಹಾಗೂ ಜಿಲ್ಲೆಗಳ ಜಂಟಿ/ಉಪ ನಿರ್ದೇಶಕರುಗಳನ್ನ ನೇರ ಹೊಣೆಗಾರರನ್ನಾಗಿ ಮಾಡಿ ಸೂಕ್ತ ಶಿಸ್ತು ಕ್ರಮಕೈಗೊಳ್ಳಲಾಗುವುದು.

Signed by K Rakesh Kumar
Date: 10-08-2023 10:51:18
**ಆಯುಕ್ತರು**
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

**ಪ್ರತಿಯನ್ನು:-**

1. ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರಿಗೆ ಮುಂದಿನ ಅವಗಾಹನೆಗಾಗಿ ಸಲ್ಲಿಸಿದೆ.
2. ಯೋಜನಾಧಿಕಾರಿಗಳು, ಯೋಜನಾ ಅಧಿಕಾರಿಗಳು SHP / SSP ಬೆಂಗಳೂರು ರವರಿಗೆ ಈ ಬಗ್ಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
3. ತಾಂತ್ರಿಕ ನಿರ್ದೇಶಕರು, ಎನ್ಐಸಿ ರವರಿಗೆ ಇಲಾಖೆಯSHP (STATE HOSTEL PORTAL)ನಲ್ಲಿ HYGENIC HOSTEL CONER ಅಳವಡಿಸಲು ಕ್ರಮಕೈಗೊಳ್ಳಲು ಸೂಚಿಸಿದೆ.
4. ಎಲ್ಲಾ ಜಿಲ್ಲಾ ನೋಡಲ್ ಅಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ, ಎಲ್ಲಾ ಜಿಲ್ಲೆಗಳು.
5. ಜಂಟಿ/ಉಪ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಎಲ್ಲಾ ಜಿಲ್ಲೆಗಳು.
6. ಎಲ್ಲಾ ತಾಲ್ಲೂಕು ಸಹಾಯಕ ನಿರ್ದೇಶಕರು (ಗ್ರೇಡ್1&2) ರವರಿಗೆ ಸೂಕ್ತ ಕ್ರಮಕ್ಕಾಗಿ.
7. ಸಂಬಂಧಪಟ್ಟ ನಿಲಯಮೇಲ್ವಿಚಾರಕರುಗಳಿಗೆ ಮುಂದಿನ ಕ್ರಮಕ್ಕಾಗಿ (ತಾಲ್ಲೂಕಿನ ಸಹಾಯಕ ನಿರ್ದೇಶಕರುಗಳ ಮುಖಾಂತರ)
8. ಕಛೇರಿ ಪ್ರತಿ.